# ಜಿಲ್ಲಾಧಿಕಾರಿಗಳು ಹಾಗೂ ಫೆಡರಲ್ ಸಹಕಾರ ಸಂಘಗಳ
# ಜಿಲ್ಲಾ ಚುನಾವಣಾಧಿಕಾರಿಗಳ ಕಾರ್ಯಾಲಯ, ಕೋಲಾರ ಜಿಲ್ಲೆ, ಕೋಲಾರ.

**E-mail ID:** deo.kolar07@gmail.com (ಚುನಾವಣೆ ಶಾಖೆ) ದೂರವಾಣಿ ಸಂಖ್ಯೆ: 08152-243507

ನಂ.ಜಿಚುಕೋ/ಚುನಾವಣೆ/ಕೋಮುಲ್/ಸಿಆರ್/75/2023-24 ದಿನಾಂಕ: 09/06/2025

**ಕೋಲಾರ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತಿ, ಕೋಲಾರ ಇದರ ಆಡಳಿತ ಮಂಡಳಿಯ ಚುನಾವಣೆಗೆ ಸಂಬಂಧಿಸಿದಂತೆ ಕರ್ನಾಟಕ ಸಹಕಾರ ಸಂಘಗಳ ನಿಯಮಾವಳಿಗಳು, 1960 ರ ನಿಯಮ 13(ಡಿ) ರೀತ್ಯ ಅಂತಿಮ ಮತದಾರರ ಪಟ್ಟಿಗಳ ಪ್ರಕಟಣೆ**

********

ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ರವರ ಆದೇಶ ಸಂಖ್ಯೆ:ಸಚುಪ್ರಾ/ಆಡಳಿತ/ಫೆಸಸಂಚುಣೆ/08/2024-25 ದಿನಾಂಕ:15/06/2024 ರಂತೆ ಕೋಲಾರ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ, ಕೋಲಾರ ಇದರ ಆಡಳಿತ ಮಂಡಳಿಯ ಚುನಾವಣೆ ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ, ಕೋಲಾರ ಜಿಲ್ಲೆ, ಕೋಲಾರ ರವರನ್ನು ಜಿಲ್ಲಾ ಚುನಾವಣಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿರುತ್ತದೆ. ಅದರಂತೆ, ಕೋಲಾರ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ, ಕೋಲಾರ ಇದರ ಆಡಳಿತ ಮಂಡಳಿಯ ಚುನಾವಣೆಯನ್ನು ದಿನಾಂಕ: 25/06/2025 ರಂದು ನಿರ್ವಹಿಸಲು ಕರ್ನಾಟಕ ಸಹಕಾರ ಸಂಘಗಳ ನಿಯಮಾವಳಿಗಳು, 1960 ರ ನಿಯಮ 14(1) ರಡಿ ಈ ಕಚೇರಿಯ ಆದೇಶ ಸಂಖ್ಯೆ: ಜಿಚುಕೋ/ಚುನಾವಣೆ/ಕೋಮುಲ್/ಸಿಆರ್/75/2023-24 ದಿನಾಂಕ: 29/03/2025 ರಂತೆ ನಮೂನೆ-11 ರಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿರುದ್ದು, ದಿನಾಂಕ: 05/05/2025 ರಂದು ಕರ್ನಾಟಕ ಸಹಕಾರ ಸಂಘಗಳ ನಿಯಮಾವಳಿಗಳು, 1960 ರ ನಿಯಮ 13-ಡಿ ರನ್ವಯ ರಂತೆ ಕೋಲಾರ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ, ಕೋಲಾರ ಇದರ ಆಡಳಿತ ಮಂಡಳಿಯ ಚುನಾವಣೆಗೆ ಸಂಬಂಧಪಟ್ಟಂತೆ ಮತ ನೀಡುವ ಹಕ್ಕುಳ್ಳ ಸದಸ್ಯರ / ಡೆಲಿಗೇಟ್‌ಗಳ ಕರಡು ಪಟ್ಟಿ ಮತ್ತು ವಿವಿಧ ಕಾರಣಗಳ ಮೇರೆಗೆ ಅನರ್ಹಗೊಂಡಿರುವ ಸಹಕಾರ ಸಂಘಗಳ ಕರಡು ಪಟ್ಟಿಯನ್ನು ಒಳಗೊಂಡಂತೆ ಕರಡು ಮತದಾರರ ಪಟ್ಟಿಯನ್ನು ಸಾರ್ವಜನಿಕರ ಗಮನಕ್ಕೆ ಪ್ರಕಟಿಸಲಾಗಿರುತ್ತದೆ.

ದಿನಾಂಕ: 02/06/2025 ರವರೆಗೆ ಸ್ವೀಕೃತವಾದ ದೂರು ಮತ್ತು ಆಕ್ಷೇಪಣೆಗಳನ್ನು ಪರಿಶೀಲಿಸಿ ವ್ಯವಸ್ಥಾಪಕ ನಿರ್ದೇಶಕರು, ಕೋಮುಲ್, ಕೋಲಾರ ರವರು ಕರಡು ಮತದಾರರ ಪಟ್ಟಿಗೆ ನಿಯಮಾನುಸಾರ ಸೂಕ್ತ ತಿದ್ದುಪಡಿಯನ್ನು ಕೈಗೊಂಡು ದಿನಾಂಕ: 06/06/2025 ರಂದು ಈ ಕಛೇರಿಗೆ ಅಂತಿಮ ಮತದಾರರ ಪಟ್ಟಿಯನ್ನು ಸಲ್ಲಿಸಿದ್ದು, ಅವುಗಳನ್ನು ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಉಪ ನಿರ್ದೇಶಕರು, ಕೋಲಾರ ಜಿಲ್ಲೆ ರವರಿಂದ ಪರಿಶೀಲನೆಗೆ ಒಳಪಡಿಸಿ, ದಿನಾಂಕ: 09/06/2025 ರಂದು ಕೋಲಾರ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಇದರ ಆಡಳಿತ ಮಂಡಳಿಯ ಚುನಾವಣೆಯ ಅಂತಿಮ ಮತದಾರರ ಪಟ್ಟಿಗಳನ್ನು ಈ ಮೂಲಕ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ಜಿಲ್ಲಾಧಿಕಾರಿ ಹಾಗೂ
ಜಿಲ್ಲಾ ಚುನವಣಾಧಿಕಾರಿ,
ಕೋಲಾರ ಜಿಲ್ಲೆ, ಕೋಲಾರ.